**ಸಾಕ್ಷಿಗೆ ದಿನಾಂಕಃ 25.11.2025 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತುಃ**

**ಮುಖ್ಯ ವಿಚಾರಣೆ: ಅರ್ಜಿದಾರರ ಪರ ವಕೀಲರಾದ ಶ್ರೀ.BCS ರವರಿಂದಃ**

1) ನಾನು ಈ ಪ್ರಕರಣದಲ್ಲಿ **1** ನೇ ಅರ್ಜಿದಾರಳಾಗಿರುತ್ತೇನೆ. ನನ್ನ ಮುಖ್ಯ ವಿಚಾರಣೆ ಸಾಕ್ಷ್ಯಕ್ಕೆ ಬದಲಾಗಿ ನಾನು ಈ ದಿನ ನನ್ನ ಸಾಕ್ಷಿ ಪ್ರಮಾಣ ಪತ್ರವನ್ನು ಸಲ್ಲಿಸುತ್ತಿದ್ದೇನೆ. ಸದರಿ ಪ್ರಮಾಣ ಪತ್ರದಲ್ಲಿ ಬರೆದಿರುವ ಅಂಶಗಳು ಸತ್ಯವಾಗಿರುತ್ತವೆ ಮತ್ತು ಅದನ್ನು ನಾನು ಓದಿ ತಿಳಿದುಕೊಂಡು ನನ್ನ ಸಹಿಯನ್ನು ಮಾಡಿರುತ್ತೇನೆ. ಸದರಿ ಪ್ರಮಾಣ ಪತ್ರವನ್ನು ನನ್ನ ಹೇಳಿಕೆಗೆ ಅನುಸಾರವಾಗಿ ನಮ್ಮ ವಕೀಲರು ಸಿದ್ಧಪಡಿಸಿದ್ದಾರೆ.

2) **ಪ್ರಥಮ ವರ್ತಮಾನ ವರದಿ** ಹಾಜರುಪಡಿಸಿದ್ದು ಅದನ್ನು **ನಿ.ಪಿ.1** ಎಂದು, **ಪೋಲಿಸರಿಗೆ ನೀಡಿರುವ ದೂರನ್ನು ನಿ.ಪಿ.2** ಎಂದು, ಸ್ಥಳ ಪಂಚನಾಮೆಯನ್ನು **ನಿ.ಪಿ.3** ಎಂದು, ಕೃತ್ಯ ನಡೆದ **ಸ್ಥಳದ ನಕ್ಷೆಯನ್ನು** ನಿ.ಪಿ.**4** ಎಂದು, ಪಿಎಂ ವರದಿಯನ್ನು **ನಿ.ಪಿ.5** ಎಂದು ಮತ್ತು ಅಂತಿಮ ವರದಿಯನ್ನು **ನಿ.ಪಿ.6** ಎಂದು ಗುರುತಿಸಿದೆ.

3) ಐಎಂವಿ ವರದಿಯನ್ನು **ನಿ.ಪಿ.7** ಎಂದು, ಶವ ತನಿಖಾ ವರದಿಯನ್ನು **ನಿ.ಪಿ.8** ಎಂದು ಮತ್ತು ಡೆತ್ ಮೆಮೊ ಅನ್ನು **ನಿ.ಪಿ.9** ಎಂದು ಮತ್ತು ವರದಿಯನ್ನು **ನಿ.ಪಿ.10** ಎಂದು ಗುರುತಿಸಿದೆ.

4) **ಐ.ಎಂ.ವಿ ಕಾಯ್ದೆ ಕಲಂ 133** ರ ಅಡಿಯಲ್ಲಿ ನೀಡಿರುವಂತಹ **ನೋಟಿಸ್** ಅನ್ನು ನಿ.ಪಿ.**11** ಎಂದು ಮತ್ತು **ಆ ನೋಟಿಸಿಗೆ ನೀಡಿರುವಂತಹ ಉತ್ತರವನ್ನು** ನಿ.ಪಿ.**12** ಎಂದು ಗುರುತಿಸಿದೆ.

5) ಪೊಲೀಸರು ನ್ಯಾಯಾಲಯಕ್ಕೆ ಸಲ್ಲಿಸಿರುವಂತಹ ಒಂದು ನಿವೇದನೆಯನ್ನು **ನಿ.ಪಿ.13** ಎಂದು ಗುರುತಿಸಿದೆ.

**ಸೂಚನೆಃ** ನಿ.ಪಿ.**1** ರಿಂದ **13** ಎಂದು ಗುರುತು ಆಗಿರುವ ದಾಖಲೆಗಳು ದೊಡ್ಡಬಳ್ಳಾಪುರದ ಗ್ರಾಮಾಂತರ ಪೊಲೀಸ್ ಠಾಣೆಯವರು ನೀಡಿರುವ ಯಥಾ ನಕಲು ಆಗಿವೆ.

6) ಈಗ ಸಾಕ್ಷಿದಾರರು ತಮ್ಮ ಮೂಲ ಆಧಾರ್ ಕಾರ್ಡ್ ದಾಖಲೆ ಮತ್ತು ಇತರೆ ಅರ್ಜಿದಾರರ ಆಧಾರ್ ಕಾರ್ಡ್ ಗಳನ್ನು ಮತ್ತು ಅಪಘಾತದಲ್ಲಿ ಮರಣ ಹೊಂದಿದಂತಹ ರವಿ ರವರ ಆಧಾರ್ ಕಾರ್ಡ್ ದಾಖಲೆಯನ್ನು ಮತ್ತು ಇದೇ ದಾಖಲೆಗಳ ಫೋಟೋ ಪ್ರತಿಗಳನ್ನು ಹಾಜರುಪಡಿಸಿದ್ದಾರೆ. ಸದರಿ ಮೂಲ ಪ್ರತಿಗಳನ್ನು ಮತ್ತು ಫೋಟೋ ಪ್ರತಿಗಳನ್ನು ಹೋಲಿಕೆ ಮಾಡಿ ನೋಡಲಾಗಿ ಈ ಮೂಲ ದಾಖಲೆಗಳನ್ನು ಆಧಾರವಾಗಿ ಇಟ್ಟುಕೊಂಡು ಯಾಂತ್ರಿಕ ಸಹಾಯದಿಂದ ಈ ಫೋಟೋ ಪ್ರತಿಗಳನ್ನು ಸಿದ್ಧಪಡಿಸಿದ್ದಾರೆ ಎಂದು ಕಂಡು ಬರುತ್ತದೆ. ಆದ ಕಾರಣದಿಂದ ಸದರಿ ಫೋಟೋ ಪ್ರತಿಗಳನ್ನು ನಿ.ಪಿ.**14** ರಿಂದ **18** ಎಂದು ಗುರುತಿಸಿದೆ ಮತ್ತು ಮೂಲ ದಾಖಲೆಗಳನ್ನು ಈ ಸಾಕ್ಷಿದಾರರಿಗೆ ವಾಪಸ್ಸು ನೀಡಿದೆ.

7) **Discharge Summary** ಅನ್ನು ನಿ.ಪಿ.**18** ಎಂದು ಗುರುತಿಸಿದೆ.

8) ಒಟ್ಟು **19** ಮೆಡಿಕಲ್ ಬಿಲ್ಲುಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಒಟ್ಟಾಗಿ ನಿ.ಪಿ.**20** ಎಂದು ಗುರುತಿಸಿದೆ.

9) ಒಟ್ಟು **21 Medical Prescriptions** ಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಒಟ್ಟಾಗಿ ನಿ.ಪಿ.**21** ಎಂದು ಗುರುತಿಸಿದೆ.

10) ಅಡ್ವಾನ್ಸ್ ರಶೀದಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿ.ಪಿ.**22** ರಿಂದ **24** ಎಂದು ಗುರುತಿಸಿದೆ.

11) ಆದ ಕಾರಣದಿಂದ ಪ್ರಾರ್ಥನೆಯಂತೆ ನಮಗೆ ಪರಿಹಾರವನ್ನು ನೀಡಬೇಕೆಂದು ಪ್ರಾರ್ಥಿಸಿಕೊಳ್ಳುತ್ತೇನೆ.

**ಪಾರ್ಟೀ ಸವಾಲು ಕೋರಿಕೆಯ ಮೇರೆಗೆ ಮುಂದೂಡಲಾಯಿತು.**

(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಿಸಲ್ಪಟ್ಟಿದೆ)

**(ಓ.ಹೇ.ಕೇ.ಸ.ಇ)**

**ಮುಖ್ಯ ನ್ಯಾಯಾಧೀಶರು,**
ಲಘು ವ್ಯವಹಾರಗಳ ನ್ಯಾಯಾಲಯ,
ಬೆಂಗಳೂರು.